# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **169(272)** |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | ದಿನಾಂಕ: 06-07-2023 |
| 4) | ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕಾರ್ಖಾನೆಗಳ ಸಹಾಯಕ ನಿರ್ದೇಶಕರುಗಳ ಕಛೇರಿಗಳಲ್ಲಿರುವ ಒಟ್ಟು ಸಹಾಯಕ ನಿರ್ದೇಶಕರು ಮತ್ತು ಬಾಯ್ಲರ್ ಹುದ್ದೆಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು;</td><td>ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯಲ್ಲಿರುವ ಒಟ್ಟು ಸಹಾಯಕ ನಿರ್ದೇಶಕರು ಮತ್ತು ಬಾಯ್ಲರ್ ಹುದ್ದೆಗಳ ಸಂಖ್ಯೆಯ ವಿವರ ಈ ಕೆಳಕಂಡಂತಿದೆ.
<table>
<tr><th>ಹುದ್ದೆಯ ಪದನಾಮ</th><th>ಮಂಜೂರಾದ ಹುದ್ದೆಗಳ ಸಂಖ್ಯೆ</th><th>ಭರ್ತಿಯಾಗಿರುವ ಹುದ್ದೆಗಳ ಸಂಖ್ಯೆ</th><th>ಖಾಲಿ ಇರುವ ಹುದ್ದೆಗಳ ಸಂಖ್ಯೆ</th></tr>
<tr><td>ಕಾರ್ಖಾನೆಗಳ ಸಹಾಯಕ ನಿರ್ದೇಶಕರು</td><td>20</td><td>07</td><td>13</td></tr>
<tr><td>ಬಾಯ್ಲರುಗಳ ಸಹಾಯಕ ನಿರ್ದೇಶಕರು</td><td>04</td><td>-</td><td>04</td></tr>
<tr><td>ಒಟ್ಟು</td><td>24</td><td>07</td><td>17</td></tr>
</table></td></tr>
<tr><td>ಆ</td><td>ಸದರಿ ಖಾಲಿ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಭರ್ತಿ ಮಾಡದಿರಲು ಕಾರಣವೇನು? (ವಿವರ ನೀಡುವುದು)</td><td>ಸದರಿ ಎರಡು ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ, ಕಾರ್ಖಾನೆಗಳ ಸಹಾಯಕ ನಿರ್ದೇಶಕರು ವೃಂದದ 09 ಹುದ್ದೆಗಳನ್ನು ಹಾಗೂ ಬಾಯ್ಲರುಗಳ ಸಹಾಯಕ ನಿರ್ದೇಶಕರು ವೃಂದದ 03 ಹುದ್ದೆಗಳನ್ನು ಮಾತ್ರ ಭರ್ತಿ ಮಾಡಲು ಸರ್ಕಾರವು ನೀಡಿರುವ ಅನುಮತಿ ಮೇರೆಗೆ, ಇಲಾಖಾ ವತಿಯಿಂದ ಸದರಿ ಹುದ್ದೆಗಳನ್ನು ಅಧಿಸೂಚಿಸಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಕಳುಹಿಸಲಾಗಿತ್ತು.<br><br>ಸರ್ಕಾರವು ಹಿಂದುಳಿದ ವರ್ಗಗಳಿಗೆ ಮೀಸಲಾತಿಯನ್ನು ಪುನರ್ ವರ್ಗೀಕರಿಸಿ ಆದೇಶಿಸಿರುವುದರಿಂದ ಸಮತಳ ಮೀಸಲಾತಿಯಲ್ಲಿ ವ್ಯತ್ಯಯ ಉಂಟಾಗಬಹುದಾದ ಕಾರಣ ಈ ಬಗ್ಗೆ ಸರ್ಕಾರದಿಂದ ಸೂಕ್ತ ಸ್ಪಷ್ಟೀಕರಣ ಸ್ವೀಕೃತವಾಗುವವರೆಗೆ ನೇಮಕಾತಿಗೆ ಸಂಬಂಧಿಸಿದ ಯಾವುದೇ ಪ್ರಸ್ತಾವನೆಯನ್ನು ಸ್ವೀಕರಿಸುವ ಪ್ರಕ್ರಿಯೆ ಸ್ಥಗಿತಗೊಳಿಸಲಾಗಿದೆ ಎಂದು ಲೋಕಸೇವಾ ಆಯೋಗವು ತಿಳಿಸಿ, ಪ್ರಸ್ತಾವನೆಯನ್ನು ಹಿಂದಿರುಗಿಸಿರುತ್ತದೆ. ಆದ ಕಾರಣ ಸದರಿ ವೃಂದಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ.</td></tr>
</table>

ಸಂಖ್ಯೆ: ಕಾಇ 67 ಕಾಬಾನಿ 2023

( ಸಂತೋಷ್ ಎಸ್. ಲಾಡ್)
ಕಾರ್ಮಿಕ ಸಚಿವರು